ಕರ್ನಾಟಕ ಸರ್ಕಾರ
ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ:ಬಿಟಿಇ/01/ಇಸಿಎಸ್(1)/2013

ಕಾರ್ಯದರ್ಶಿಯವರ ಕಛೇರಿ
ತಾಂತ್ರಿಕ ಪರೀಕ್ಷಾ ಮಂಡಳಿ
ಅರಮನೆ ರಸ್ತೆ, ಬೆಂಗಳೂರು-1
ದಿನಾಂಕ: 03-05-2013

**ಸುತ್ತೋಲೆ**

ವಿಷಯ: 2013 ರ ಏಪ್ರಿಲ್/ಮೇ ಸೆಮಿಸ್ಟರ್ ಪರೀಕ್ಷೆಗಳ ಕುರಿತು.
ಉಲ್ಲೇಖ: 1.ತಾ.ಪ.ಮಂ ಸುತ್ತೋಲೆ ಸಂ: ಬಿಟಿಇ/01/ಇಎಪಿ/2012 ದಿ:15-11-2012
2.ತಾ.ಪ.ಮಂ ಸುತ್ತೋಲೆ ಸಂ: ಬಿಟಿಇ/05/ಇಸಿಎಸ್/2012 ದಿ:16-04-2013
***********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2013 ರ ಏಪ್ರಿಲ್/ಮೇ ಸೆಮಿಸ್ಟರ್ ಪರೀಕ್ಷೆಯ ಬಗ್ಗೆ ಅವಶ್ಯವಾದ ಮಾಹಿತಿಯನ್ನು ಈ ಕೆಳಗೆ ನೀಡಲಾಗಿದೆ. ಸದರಿ ಮಾಹಿತಿಯನ್ನು ಸಂಸ್ಥೆಯ ಪ್ರಿನ್ಸಿಪಾಲರುಗಳು ತಪ್ಪದೇ ವಿದ್ಯಾರ್ಥಿಗಳ/ಉಪನ್ಯಾಸಕರ ಗಮನಕ್ಕೆ ತರಬೇಕೆಂದು ತಿಳಿಸಲಾಗಿದೆ.

1. 2013 ರ ಏಪ್ರಿಲ್/ಮೇ ಸೆಮಿಸ್ಟರ್ ಪ್ರಾಯೋಗಿಕ್ರ ಪರೀಕ್ಷೆಗಳನ್ನು ಉಲ್ಲೇಖ (1)ರ ಸುತ್ತೋಲೆಯಲ್ಲಿನ ಮಾರ್ಗದರ್ಶನದಂತೆ ದಿ:15-05-2013 ರಿಂದ ದಿ:23-05-2013 ರ ಒಳಗೆ ನಡೆಸಬೇಕೆಂದು ತಿಳಿಸಲಾಗಿದೆ. ಪ್ರಾಯೋಗಿಕ ಪರೀಕ್ಷಕರ ಪಟ್ಟಿಯನ್ನು BTELinx ನಲ್ಲಿ ಅತೀ ಶೀಘ್ರವಾಗಿ ಪ್ರಕಟಿಸಲಾಗುವುದು ಎಂದು ತಿಳಿಸಲಾಗಿದೆ.

2. 6ನೇ ಸೆಮಿಸ್ಟರ್‌ನ ಕೋರ್ಸ್ ತೇರ್ಗಡೆಯಾಗಿದ್ದು ಮತ್ತು Back log ವಿಷಯಗಳನ್ನು ಹೊಂದಿರುವ ವಿದ್ಯಾರ್ಥಿಗಳ ಪ್ರಾಯೋಗಿಕ ಪರೀಕ್ಷೆಗಳನ್ನು ಆದ್ಯತೆ ಮೇರೆಗೆ ನಡೆಸಲು ಕ್ರಮಕೈಗೊಳ್ಳಬೇಕೆಂದು ತಿಳಿಸಲಾಗಿದೆ ಮತ್ತು ಈ ಪರೀಕ್ಷೆಗಳ ಅಂಕಗಳನ್ನು ತ್ವರಿತವಾಗಿ BTELinx Onlin ನಲ್ಲಿ ಕೀಯಿಂಗ್ ಮಾಡಿಸಲು ಕ್ರಮಕೈಗೊಳ್ಳಬೇಕೆಂದು ತಿಳಿಸಲಾಗಿದೆ.

3. ದಿ:15-05-2013 ರೊಳಗೆ ಆಂತರಿಕ ಅಂಕಗಳನ್ನು ಉಲ್ಲೇಖ (2) ರ ಸುತ್ತೋಲೆಯಲ್ಲಿನ ಮಾರ್ಗದರ್ಶನದಂತೆ BTELinx Online ನಲ್ಲಿ Upload ಮಾಡುವ ಬಗ್ಗೆ ತುರ್ತಾಗಿ ಕ್ರಮಕೈಗೊಳ್ಳಬೇಕೆಂದು ತಿಳಿಸಲಾಗಿದೆ.

4. D CET-2013 ರ ಪರೀಕ್ಷೆಗೆ ಹಾಜರಾಗುತ್ತಿರುವ ವಿದ್ಯಾರ್ಥಿಗಳ ಫಲಿತಾಂಶ ಪ್ರಕಟವಾದ ಒಂದು ವಾರದ ಒಳಗೆ ಅಂಕ ಪಟ್ಟಿಗಳನ್ನು ಪಾಲಿಟೆಕ್ನಿಕ್‌ಗಳಿಗೆ ಕಳುಹಿಸಿಕೊಡಲಾಗುವುದು. ಪ್ರಯುಕ್ತ ಅಂಕಪಟ್ಟಿಗಳ(True Copy) ದೃಢೀಕರಣಕ್ಕಾಗಿ ಮಂಡಳಿಗೆ ಬರುವ ಅವಶ್ಯಕತೆಯಿರುವುದಿಲ್ಲ. ಪ್ರಯುಕ್ತ ಈ ವಿಷಯವನ್ನು ವಿದ್ಯಾರ್ಥಿಗಳ ಗಮನಕ್ಕೆ ತಪ್ಪದೇ ತರುವಂತೆ ತಿಳಿಸಲಾಗಿದೆ.

5. D CET-2013 ರ ಪರೀಕ್ಷೆಗೆ ಹಾಜರಾಗುತ್ತಿರುವ ವಿದ್ಯಾರ್ಥಿಗಳ ಫಲಿತಾಂಶವನ್ನು ಜೂನ್ 2013 ರ ಮೊದಲ ವಾರದೊಳಗೆ ಪ್ರಕಟಿಸಲಾಗುವುದು. ಫಲಿತಾಂಶ ಪ್ರಕಟಿಸಿದ ನಂತರ ಮರು ಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಲು ಮೂರು ದಿನಗಳ ಕಾಲಾವಕಾಶ ನೀಡಲಾಗುವುದು. ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಮರು ಮೌಲ್ಯಮಾಪನದ ಫಲಿತಾಂಶವನ್ನು ಶೀಘ್ರವಾಗಿ ನೀಡಲಾಗುವುದು, ಆದುದರಿಂದ ವಿದ್ಯಾರ್ಥಿಗಳು ನೇರವಾಗಿ ಉತ್ತರ ಪತ್ರಿಕೆಗಳ ಮರು ಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಬೇಕಾಗಿರುತ್ತದೆ. ವಿದ್ಯಾರ್ಥಿಗಳು ಉತ್ತರ ಪತ್ರಿಕೆಗಳ Photo copy ಪಡೆಯಲಿಚ್ಛಿಸಿ ಸಂಸ್ಥೆಯ ಮೂಲಕ ಅರ್ಜಿ ಸಲ್ಲಿಸಿದಲ್ಲಿ ಮರು ಮೌಲ್ಯಮಾಪನದ ಫಲಿತಾಂಶ ಪ್ರಕಟವಾದ ನಂತರ Photo copy ನೀಡಲು ಕ್ರಮಕೈಗೊಳ್ಳಲಾಗುವುದು.

6. D CET-2013 ವಿದ್ಯಾರ್ಥಿಗಳ ಫಲಿತಾಂಶವನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ನಿಗದಿತ ದಿನಾಂಕದೊಳಗೆ ನೀಡಬೇಕಾಗಿರುವುದರಿಂದ ಫೋಟೋ ಪ್ರತಿ ಪಡೆದು ನಂತರ ಮರು ಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸುವ ಅವಕಾಶವಿರುವುದಿಲ್ಲ. ಸಂಸ್ಥೆಯ ಪ್ರಾಚಾರ್ಯರುಗಳು ಸದರಿ ವಿಷಯವನ್ನು ಎಲ್ಲಾ ವಿದ್ಯಾರ್ಥಿಗಳು/ಉಪನ್ಯಾಸಕರು/ಪೋಷಕರ ಗಮನಕ್ಕೆ ತರುವಂತೆ ಹಾಗೂ ಸೂಚನಾ ಫಲಕದಲ್ಲಿ ಪ್ರಕಟಿಸಲು ತಿಳಿಸಲಾಗಿದೆ.

8. ವಿದ್ಯಾರ್ಥಿಗಳು ಪ್ರವೇಶ ಪತ್ರಗಳನ್ನು ಪಡೆಯುವ ಮೊದಲು D CET-2013 ಪರೀಕ್ಷೆ ತೆಗೆದುಕೊಳ್ಳುವ ಬಗ್ಗೆ ಮನವಿ ಸಲ್ಲಿಸಲು ಅವಕಾಶ ನೀಡಲಾಗಿತ್ತು. ನಿಗದಿತ ಸಮಯದಲ್ಲಿ ಮನವಿ ಸಲ್ಲಿಸಿರದ ವಿದ್ಯಾರ್ಥಿ ಪ್ರವೇಶ ಪತ್ರವನ್ನು ಪಡೆದ ನಂತರ D CET-2013 ಪರೀಕ್ಷೆ ತೆಗೆದುಕೊಳ್ಳಲು ಇಚ್ಛಿಸಿ ನೀಡುವ ಮನವಿಯನ್ನು ಪುರಸ್ಕರಿಸಲಾಗುವುದಿಲ್ಲ ಎಂಬ ಮಾಹಿತಿಯನ್ನು ವಿದ್ಯಾರ್ಥಿಗಳ ಗಮನಕ್ಕೆ ತರಬೇಕೆಂದು ತಿಳಿಸಲಾಗಿದೆ.

3/5

ಕಾರ್ಯದರ್ಶಿ

ಇವರಿಗೆ,

1. ರಾಜ್ಯದ ಎಲ್ಲಾ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರುಗಳಿಗೆ – ಮಾಹಿತಿಗಾಗಿ ಮತ್ತು ಮುಂದಿನ ಕ್ರಮಕ್ಕಾಗಿ

ಪ್ರತಿ:

1. ಇ– ಆಡಳಿತ
2. ಕಂಪ್ಯೂಟರ್ ಕೇಂದ್ರ
3. ಕಡತಕ್ಕೆ